ಓ.ಎಸ್ ನಂ. 37/2021 ಪಿ.ಡಬ್ಲೂಃ 1

ದಿನಾಂಕಃ 23.10.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು

ಮುಖ್ಯ ವಿಚಾರಣೆ ಶ್ರೀ. ಟಿ.ಎಸ್.ಪಿ. ವಕೀಲರಿಂದ

ನಾನು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿ ಹೇಳಿರುವ ಸಂಗತಿಗಳು ಸತ್ಯವಾಗಿರುತ್ತವೆ. ಅವುಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಸದರಿ ಅಂಶಗಳನ್ನು ವಕೀಲರಿಗೆ ನಾನೇ ಹೇಳಿ ಬರೆಸಿರುತ್ತೇನೆ.

ನಾನು ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ಹಾಜರುಮಾಡಿದ್ದು ಅವುಗಳನ್ನು ನಿಶಾನೆಗಳಾಗಿ ಗುರುತಿಸಲು ಕೋರುತ್ತೇನೆ.

ಸಾಕ್ಷಿ ದಾಖಲಾತಿಗಳನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ಈ ಕೆಳಗಿನಂತೆ ನಿಶಾನೆಯಾಗಿ ಗುರುತಿಸಲಾಯಿತು.

ದಿನಾಂಕಃ 21.12.2017 ರ ನೊಂದಾಯಿತ ಕ್ರಯದ ಕರಾರು ಪತ್ರವನ್ನು ನಿ.ಪಿ.1, ದಿಃ 17.09.2018 ರ ಮರು ಮುಂದುವರಿಕೆಯ ಕ್ರಯದ ಕರಾರು ಪತ್ರವನ್ನು ನಿ.ಪಿ. 2 ಎಂದು ಗುರುತಿಸಲಾಯಿತು. ಸಾಕ್ಷಿ ನಿ.ಪಿ.1 ರಲ್ಲಿರುವ ತನ್ನ ಸಹಿಗಳನ್ನು, ಪ್ರತಿವಾದಿಯ ಸಹಿಗಳನ್ನು ಹಾಗೂ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿದಾರರ ಸಹಿಗಳನ್ನು ನಿ.ಪಿ.1(ಎ), 1( ಬಿ), 1(ಸಿ) ಮತ್ತು 1(ಡಿ) ಎಂದು, ಪ್ರತಿವಾದಿಯ ಸಹಿಗಳನ್ನು ಕ್ರಮವಾಗಿ ನಿ.ಪಿ.1(ಇ) ಯಿಂದ 1(ಹೆಚ್) ಎಂದು ಗುರುತಿಸಲಾಯಿತು. ಸಾಕ್ಷಿ ನಿ.ಪಿ.2 ರಲ್ಲಿರುವ ತನ್ನ ಸಹಿಗಳನ್ನು, ಪ್ರತಿವಾದಿಯ ಸಹಿಗಳನ್ನು ಹಾಗೂ ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿದಾರರ ಸಹಿಗಳನ್ನು ನಿ.ಪಿ.2(ಎ), 2 (ಬಿ), 2(ಸಿ) ಮತ್ತು 2(ಡಿ) ಎಂದು, ಪ್ರತಿವಾದಿಯ ಸಹಿಗಳನ್ನು ಕ್ರಮವಾಗಿ ನಿ.ಪಿ.2(ಇ) ಯಿಂದ 2(ಹೆಚ್) ಎಂದು,

ಆರ್.ಟಿ.ಸಿ. ಪಹಣಿಯನ್ನು ನಿ.ಪಿ.3 ಎಂದು, ಲೀಗಲ್ ನೋಟಿಸ್ ಅನ್ನು ನಿ.ಪಿ.4 ಎಂದು ಅಂಚೆ ರಶೀದಿಯನ್ನು ನಿ.ಪಿ.5 ಎಂದು, ಅಂಚೆ ಸ್ವೀಕೃತಿಯನ್ನು ನಿ,ಪಿ.6 ಎಂದು, 2024–25ನೇ ಸಾಲಿನ ಎರಡು ಆರ್.ಟಿ.ಸಿ. ಪಹಣಿಗಳನ್ನು ಕ್ರಮವಾಗಿ ನಿ.ಪಿ.7 ಮತ್ತು 8 ಎಂದು ಗುರುತಿಸಲಾಯಿತು.

ವಕೀಲರ ಕೋರಿಕೆಯ ಮೇರೆಗೆ ಮುಖ್ಯ ವಿಚಾರಣೆ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸ. ಇ. ಒ,

(ಶ್ರೀಮತಿ. ನಿವೇದಿತಾ ಮಹಾಂತೇಶ್ ಮುನವಳ್ಳಿಮಠ್)
ಹಿ.ವ್ಯ.ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರು
ಹೊಳೆನರಸೀಪುರ.